ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ

ಡಾ.ಶಿವರಾಮ ಕಾರಂತ ಪಿಲಿಕುಳ ನಿಸರ್ಗಧಾಮ, ಮಂಗಳೂರು

# ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರ

# PILIKULA REGIONAL SCIENCE CENTRE

## ರಾಷ್ಟ್ರೀಯ ಗಣಿತ ದಿನಾಚರಣೆ – 2023

ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ದಿನಾಂಕ 22.12.2023ರಂದು ದ. ಕ. ಜಿಲ್ಲೆಯ ಅಟಲ್ ಟಿಂಕರಿಂಗ್ ಲ್ಯಾಬ್‌ನ ಹಾಗೂ ಆಯ್ದ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಮತ್ತು ಅಧ್ಯಾಪಕರಿಗೆ ರಾಷ್ಟ್ರೀಯ ಗಣಿತ ದಿನಾಚರಣೆಯ ಪ್ರಯುಕ್ತ ಒಂದು ದಿನದ ಕಾರ್ಯಾಗಾರವನ್ನು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಮಂಗಳೂರು ಇವರ ಸಹಕಾರದೊಂದಿಗೆ ಆಯೋಜಿಸಲಾಗಿತ್ತು.




ಉದ್ಘಾಟನೆಯನ್ನು ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಶ್ರೀ ಪ್ರವೀಣ ಬಿ. ನಾಯಕ್ ನೆರವೇರಿಸಿ ಮಾತನಾಡುತ್ತಾ ಇಂತಹ ಕಾರ್ಯಾಗಾರಗಳ ಮಾಹಿತಿಯನ್ನು ಸದುಪಯೋಗಪಡಿಸಿಕೊಂಡು ವಿದ್ಯಾರ್ಥಿಗಳು ಮೂಲ ವಿಜ್ಞಾನ ಕ್ಷೇತ್ರಗಳಲ್ಲಿ ಆಸಕ್ತಿವಹಿಸಬೇಕು. ನಂತರ ಸಂಶೋಧನೆಗಳನ್ನು ಕೈಗೊಂಡು ದೇಶಕ್ಕೆ ಬೇಕಾದ ಸಮಸ್ಯೆಗಳ ಪರಿಹಾರಕ್ಕೆ ಪ್ರಯತ್ನಿಸಬೇಕೆಂದು ಕರೆ ಕೊಟ್ಟರು. ನಂತರ ಮಾತನ್ನಾಡಿದ ಮಂಗಳೂರು ಡಯಟ್‌ನ ಹಿರಿಯ ಉಪನ್ಯಾಸಕ ಶ್ರೀ ಶ್ರೀನಿವಾಸ್ ಅಡಿಗ,

ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ತಮ್ಮ ಸಂಸ್ಥೆಗಳಲ್ಲಿ ಇಲ್ಲಿ ಕಲಿತ ಮಾಹಿತಿಗಳನ್ನು ಹಂಚಿಕೊಂಡು ಉತ್ತಮವಾಗಿ ಕಾರ್ಯನಿರ್ವಹಿಸಬೇಕೆಂದು ಹೇಳಿ ವಿಜ್ಞಾನ ಕೇಂದ್ರದ ಸಹಕಾರವನ್ನು ಪ್ರಶಂಸಿದರು. ಡಾ. ಕೆ. ವಿ. ರಾವ್ ಅಧ್ಯಕ್ಷತೆ ವಹಿಸಿದ್ದರು.

ನಂತರ ನಡೆದ ಅಧಿವೇಶನದಲ್ಲಿ ಉಡುಪಿಯ ಶ್ರೀ ಮಧ್ವ ವಾದಿರಾಜ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ ಆ್ಯಂಡ್ ಮ್ಯಾನೇಜ್‌ಮೆಂಟ್‌ನ ಪ್ರಾಧ್ಯಾಪಕ ಡಾ. ಸಿ. ಕೆ. ಮಂಜುನಾಥ ಇವರು ಶ್ರೀನಿವಾಸ್ ರಾಮಾನುಜನ್‌ರವರ ಜೀವನ ಪಯಣ ಮತ್ತು ಸಾಧನೆ ಕುರಿತು ವಿಶೇಷ ಉಪನ್ಯಾಸ ನೀಡಿದರು. ಜೀವನದಲ್ಲಿ ಹಲವು ಕಷ್ಟಗಳನ್ನು ಎದುರಿಸಿ ಗಣಿತ ಕ್ಷೇತ್ರದಲ್ಲಿ ಮಹಾ ಸಾಧನೆಯನ್ನೇ ಮಾಡಿದ ರಾಮಾನುಜನ್ ನಮಗೆಲ್ಲ ಆದರ್ಶ ಎಂದು ಬಣ್ಣಿಸಿದರು. ಎರಡನೇ ಅಧಿವೇಶನದಲ್ಲಿ ನಿಟ್ಟೆ ತಾಂತ್ರಿಕ ಮಹಾವಿದ್ಯಾಲಯದ ಫ್ಯಾಬ್‌ಲ್ಯಾಬ್‌ನ ನಿರ್ದೇಶಕ ಶ್ರೀ ಅಕ್ಷಯ್ ಮಶೇಳ್ಕರ್ ಇವರು ಅಟಲ್ ಟಿಂಕರಿಂಗ್ ಲ್ಯಾಬ್ ಒಂದು ಅನುಭವಾತ್ಮಕ ಕಲಿಕೆ ಕುರಿತು ವಿವರಿಸಿದರು. ಎಟಿಎಲ್ ರೀಜನಲ್ ಟೀಚರ್ಸ್ ಆಫ್ ಚೇಂಜ್ (ಆರ್‌ಟಿಓಸಿ) ಆಗಿರುವ ಶ್ರೀಮತಿ ಜಯಲಕ್ಷ್ಮಿ ಅಟಲ್ ಟಿಂಕರಿಂಗ್ ಲ್ಯಾಬ್ ಎದುರಿಸುತ್ತಿರುವ ಸವಾಲುಗಳು ಕುರಿತು ಮಾತನಾಡಿದರು.

ಮಧ್ಯಾಹ್ನದ ಅವಧಿಯಲ್ಲಿ ಶ್ರೀ ಮಧ್ವ ವಾದಿರಾಜ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ ಆ್ಯಂಡ್ ಮ್ಯಾನೇಜ್‌ಮೆಂಟ್‌ನ ಸಹಾಯಕ ಪ್ರಾಧ್ಯಾಪಕ ಶ್ರೀ ರಾಘವೇಂದ್ರ ಹೆಗ್ಡೆ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳ ತಂಡದಿಂದ ಐಡಿಯಾಥಾನ್ ಮತ್ತು ಹ್ಯಾಕಾಥನ್ ಕುರಿತು ವಿವರಣೆ ಮತ್ತು ಪ್ರಾತ್ಯಕ್ಷಿಕೆಗಳು ಹಾಗೂ ಪ್ರದರ್ಶನಗಳು ನಡೆದವು.

ಕಾರ್ಯಕ್ರಮದ ಕೊನೆಯಲ್ಲಿ ನಡೆದ ಸಮಾರೋಪ ಸಮಾರಂಭದಲ್ಲಿ ಇಡೀ ಕಾರ್ಯಕ್ರಮದ ಕುರಿತು ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿ, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಜ್ಞಾನರ್ಜನೆ ಹಾಗೂ ಹೊಸ ಹೊಸ ವಿಷಯಗಳ ಬಗ್ಗೆ ಯೋಜನೆಗಳನ್ನು ಕೈಗೊಳ್ಳಲು ಉತ್ತೇಜನ ನೀಡುವುದೆಂದು ಅಭಿಪ್ರಾಯಪಟ್ಟರು.

ಇಡಿಯ ದಿನದ ಕಾರ್ಯಕ್ರಮವನ್ನು ಕೇಂದ್ರದ ಕ್ಯುರೇಟರ್ ಶ್ರೀ ಜಗನ್ನಾಥ ನಿರ್ವಹಿಸಿದರು. ಕೇಂದ್ರದ ಸಿಬ್ಬಂದಿ ಸಹಕರಿಸಿದರು.




SMVITM


SMVITM